ಲೋಕೋಪಯೋಗಿ ಕಾಮಗಾರಿಗಳು

995 (1158 ಮತ್ತು 1171) ಶ್ರೀ ಪ್ರಭು ಚೌವ್ಹಾಣ್ (ಔರಾದ್) ಶ್ರೀ ರಹೀಂ ಖಾನ್ (ಬೀದರ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಲೋಕೋಪಯೋಗಿ ಇಲಾಖೆಯ ವತಿಯಿಂದ ಬೀದರ ಜಿಲ್ಲೆಯಲ್ಲಿ 2008 ರಿಂದ ಇಲ್ಲಿಯವರೆಗೆ ಅನುಷ್ಠಾನ ಮಾಡಿದ ಕಾಮಗಾರಿಗಳೆಷ್ಟು;

ಆ) ಅವುಗಳಿಗೆ ವೆಚ್ಚ ಮಾಡಿರುವ ಹಣವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು);

ಇ) ಜಿಲ್ಲೆಯಲ್ಲಿ ಹಲವು ರಾಜ್ಯ ಹೆದ್ದಾರಿ ಹಾಗೂ ಗ್ರಾಮೀಣ ರಸ್ತೆಗಳು ತೀರಾ ಕಳಪೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸರದಿ ರಸ್ತೆಗಳ ದುರಸ್ತಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಈ) ಪ್ರಸಕ್ತ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಇಲಾಖೆ ವತಿಯಿಂದ ಹಮ್ಮಿಕೊಳ್ಳಲು ಉದ್ದೇಶಿಸಿರುವ ಯೋಜನೆಗಳು ಯಾವುವು; ಅದರಲ್ಲಿ ಬೀದರ್ (ಉತ್ತರ) ಕ್ಷೇತ್ರಕ್ಕೆ ಸಂಬಂಧಿಸಿದ ಯೋಜನೆಗಳು ಯಾವುವು? (ತಾಲ್ಲೂಕುವಾರು ವಿವರ ನೀಡುವುದು)

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಬೀದರ್ ಜಿಲ್ಲೆಯಲ್ಲಿ 2008 ರಿಂದ ಇಲ್ಲಿಯವರೆಗೆ ಅನುಷ್ಠಾನ ಮಾಡಿದ ಕಾಮಗಾರಿಗಳ ಸಂಖ್ಯೆ 3435.

ಆ) ವಿವರಗಳನ್ನು ಅನುಬಂಧ–1 ರಲ್ಲಿ ನೀಡಿದೆ.

ಇ) ಬೀದರ್ ವಿಭಾಗದ ವ್ಯಾಪ್ತಿಯಲ್ಲಿ 10 ರಾಜ್ಯ ಹೆದ್ದಾರಿಗಳಿದ್ದು ಒಟ್ಟು 693.10 ಕಿಮೀ ಇರುತ್ತದೆ. ಈ ಪೈಕಿ 250 ಕಿಮೀ ಉದ್ದದಷ್ಟು ರಸ್ತೆಯನ್ನು ವಿವಿಧ ಯೋಜನೆಗಳಡಿ ಸುಧಾರಣೆ: ನವೀಕರಣ ಮಾಡಿದ್ದು ಸಂಚಾರಕ್ಕೆ ಸುಸ್ಥಿತಿಯಲ್ಲಿದೆ. ಇನ್ನುಳಿದ 443.10 ಕಿಮೀ ಉದ್ದ ರಸ್ತೆಯನ್ನು ಪ್ರಸ್ತುತ ಸಾಲಿನಲ್ಲಿ ಬಿಡುಗಡೆ ಮಾಡಲಾದ ರಾಜ್ಯ ಹೆದ್ದಾರಿ ನಿರ್ವಹಣಾ ಅನುದಾನದಲ್ಲಿ ಗುಂಡಿ ತುಂಬಿ ದುರಸ್ತಿ ಮಾಡುವುದರೊಂದಿಗೆ ರಸ್ತೆಗಳನ್ನು ಸಂಚಾರಕ್ಕೆ ಸುಗಮಗೊಳಿಸಲಾಗುವುದು.

ಬೀದರ್ ಜಿಲ್ಲೆಯ ಗ್ರಾಮೀಣ ರಸ್ತೆಗಳ ನಿರ್ವಹಣೆ ಮತ್ತು ಸುಧಾರಣೆ ಕಾಮಗಾರಿಗಳನ್ನು ರೂ.903.63 ಲಕ್ಷಗಳ ಅನುದಾನದಲ್ಲಿ ಒಟ್ಟು 117

ಕಾಮಗಾರಿಗಳನ್ನು ಕೈಗೆತ್ತಿಕೊಂಡು 69.00 ಕಿಮೀ ಉದ್ದದ ರಸ್ತೆಯನ್ನು ಸುಧಾರಣೆ ಮತ್ತು 206.55 ಕಿಮೀ ಉದ್ದ ರಸ್ತೆಯನ್ನು ನಿರ್ವಹಣೆ ಮಾಡಿ ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಪ್ರಸಕ್ತ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಇಲಾಖೆ ವತಿಯಿಂದ ಹಮ್ಮಿಕೊಳ್ಳಲು ಉದ್ದೇಶಿಸಿರುವ ಯೋಜನೆಗಳ ವಿವರ ಈ ಕೆಳಗಿನಂತಿವೆ:

1) ರಾಜ್ಯ ಹೆದ್ದಾರಿ ನವೀಕರಣ
2) ಡಾ: ನಂಜುಂಡಪ್ಪ (ನಬಾರ್ಡ್)
3) ಡಾ: ನಂಜುಂಡಪ್ಪ (ಸುವರ್ಣ)
4) 5054 ಟಿಎಸ್‌ಪಿ ನವೀಕರಣ
5) 5054 ಎಸ್‌ಸಿಪಿ ನವೀಕರಣ
6) 5054 ಟಿಎಸ್‌ಪಿ ಇತರೆ ರಸ್ತೆ ನಿರ್ಮಾಣ
7) 5054 ಎಸ್‌ಸಿಪಿ ಇತರೆ ರಸ್ತೆ ನಿರ್ಮಾಣ

ವಿವರಗಳನ್ನು ಅನುಬಂಧ–2 ರಲ್ಲಿ ನೀಡಿದೆ.

ಸಿಎಂಎಸ್, ಎಂಟಿಡಿಪಿ ಯೋಜನೆ ಅನುದಾನ

998 (47) ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಚಿಕ್ಕೋಡಿ ಸದಲಗ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಚಿಕ್ಕೋಡಿ ಪುರಸಭೆಗೆ 2009–10ನೇ ಸಾಲಿನ ಸಿಎಂಎಸ್ ಎಂಟಿಡಿಪಿ ಯೋಜನೆಯ ಅಡಿಯಲ್ಲಿ ಮಂಜೂರಾದ ಅನುದಾನವೆಷ್ಟು? ಸದರಿ ಪುರಸಭೆ ವ್ಯಾಪ್ತಿಯಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ತಯಾರಿಸಲಾಗಿದೆಯೇ;

ಆ) ಈ ಕ್ರಿಯಾ ಯೋಜನೆಯನ್ನು ತಯಾರಿಸಲು ಅನುಸರಿಸ ಬೇಕಾದ ಮಾನದಂಡಗಳೇನು; ಸ್ಥಳೀಯ ಶಾಸಕರ ಸಹಮತಿ ಈ ಕ್ರಿಯಾ ಯೋಜನೆಗೆ ಅವಶ್ಯವಿಲ್ಲವೇ; ಶಾಸಕರ ಸಹಮತಿಯಿಲ್ಲದೇ ಕ್ರಿಯಾ ಯೋಜನೆ ತಯಾರಿಸಲಾಗಿದೆಯೇ; ತಯಾರಿಸಿದ್ದಲ್ಲಿ, ಏನು ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು)?